# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂ.ವಿ./ಪ.ವಿ./ಸಿಆರ್01/2021-22/ಇ.15

ಕುಲಸಚಿವ (ಪರೀಕ್ಷಾಂಗ)ರ ಕಛೇರಿ,
ಮಂಗಳಗಂಗೋತ್ರಿ – 574 199.

ದಿನಾಂಕ: 18.09.2021

## ಪ್ರಕಟಣೆ

ವಿಷಯ: ಅಕ್ಟೋಬರ್ 2021ರಲ್ಲಿ ನಡೆಯಲಿರುವ ಸ್ನಾತಕೋತ್ತರ ಚತುರ್ಥಸೆಮಿಸ್ಟರ್ ಪರೀಕ್ಷೆಗಳ ಬಗ್ಗೆ.

--------

ಮಂಗಳೂರು ವಿಶ್ವವಿದ್ಯಾನಿಲಯದ ಎಂ.ಎಸ್ಸಿ./ಎಂ.ಪಿ.ಎಡ್. ಸ್ನಾತಕೋತ್ತರ ಕೋರ್ಸಿನ ಪ್ರಸ್ತುತ ಚತುರ್ಥ ಸೆಮಿಸ್ಟರಿನಲ್ಲಿ ವ್ಯಾಸಂಗ ಮಾಡುತ್ತಿರುವ ಅವರ್ತಿತ ವಿದ್ಯಾರ್ಥಿಗಳಿಗೆ ಹಾಗೂ ಎಂ.ಸಿ.ಎ. ಆರನೇ ಸೆಮಿಸ್ಟರಿನ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ದಿನಾಂಕ 13.10.2021ರಿಂದ ಪ್ರಾರಂಭವಾಗಲಿರುವುದು ಎಂಬುದನ್ನು ಸಂಬಂಧಪಟ್ಟ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು/ಕಾಲೇಜು ಪ್ರಾಂಶುಪಾಲರುಗಳು ಹಾಗೂ ಸದರಿ ಪರೀಕ್ಷೆಗಳಿಗೆ ಹಾಜರಾಗಲಿರುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ. **ಮುಂದುವರಿದು ಇದೇ ಪಠ್ಯಕ್ರಮ ಅನ್ವಯವಾಗುವ 2016-17 ಮತ್ತು 2017-18ನೇ ಸಾಲಿನ ಚತುರ್ಥ ಸೆಮಿಸ್ಟರ್‌ನ ಹಿಂಬಾಕಿಯಿರುವ ಪುನರಾವರ್ತಿತ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ಪಠ್ಯಕ್ರಮ ಹೊರತುಪಡಿಸಿ ಉಳಿದ ಯಾವುದೇ ಪುನರಾವರ್ತಿತ ವಿದ್ಯಾರ್ಥಿಗಳಿದ್ದಲ್ಲಿ ವಿಶೇಷ ಪರೀಕ್ಷೆ ನಡೆಸುವ ಸಂದರ್ಭದಲ್ಲಿ ಪರೀಕ್ಷೆಗೆ ಹಾಜರಾಗಲು ಅವಕಾಶ ಕಲ್ಪಿಸಲಾಗುವುದು.**

**ಸೂಚನೆಗಳು:**

1. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು. ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸುವುದು
2. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.
3. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ. 120.00 (ರೂಪಾಯಿ ನೂರ ಇಪ್ಪತ್ತು)ನ್ನು ವಿಭಾಗ / ಕಾಲೇಜು ಮುಖ್ಯಸ್ಥರಲ್ಲಿ ಪಾವತಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.
4. ***ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಸದ್ರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನ್‌ನನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.***
5. ***ಕುಲಸಚಿವರಿಂದ ಪ್ರವೇಶಾತಿ ಅನುಮೋದನೆಯಾಗದ / ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.*** **ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ವಿಭಾಗ / ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ವಿಭಾಗ / ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.**
6. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ವಿಭಾಗ / ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ವಿಭಾಗ / ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು/ ಕಾಲೇಜುಗಳ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.
7. *ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.*